# ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಸಿ.ಜೆ.ಎಂ. ನ್ಯಾಯಾಲಯ,
# ಚಾಮರಾಜನಗರ
## <u>ಸಿ.ಸಿಃ 664/2025</u>

ಫ್ರಾಸಾ–1, ಚಾಸಾ–1

| | | |
|---|---|---|
| ಸಾಕ್ಷಿದಾರರ ಹೆಸರು | : | ಚಂದ್ರಶೇಖರ |
| ತಂದೆಯ ಹೆಸರು | : | ಮಹದೇವೆಗೌಡ |
| ವಯಸ್ಸು | : | 37ವರ್ಷ |
| ಉದ್ಯೋಗ | : | ಖಾಸಗಿ ಕೆಲಸ |
| ವಾಸ | : | ಮುತ್ತಿಗೆ ಗ್ರಾಮ |

ಸಾಕ್ಷಿಗೆ ದಿನಾಂಕಃ 03.06.2026ರಂದು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

**<u>ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ</u>**

ಚಾಸಾ–2ರವರು ನನ್ನ ತಂದೆ. ಆರೋಪಿತರು ನಮ್ಮ ಊರಿನವರು. ಈಗ್ಗೆ ಮೂರು ವರ್ಷಗಳ ಹಿಂದೆ ನಮ್ಮ ಜಮೀನಿನಲ್ಲಿ ಆರೋಪಿತರು ಕುರಿ ಮತ್ತು ಮೇಕೆಗಳನ್ನು ಮೇಯಿಸುತ್ತಿದ್ದಾಗ, ನಮಗೂ ಮತ್ತು ಆರೋಪಿತರಿಗೂ ಮಾತಿಗೆ ಮಾತು ಬೆಳೆದು ಈ ವಿಚಾರವನ್ನು ತಿಳಿಸಲು ಹೋಗಿದಾಗ ಪೊಲೀಸರು ನನ್ನಿಂದ ಒಂದು ದಾಖಲೆಗೆ ಸಹಿ ಪಡೆದುಕೊಂಡಿರುತ್ತಾರೆ ಎಂದು ಹೇಳಿ ಸಾಕ್ಷಿಯು ದೂರನ್ನು ನೋಡಿ ಗುರ್ತಿಸಿದ್ದು, ದೂರನ್ನು ನಿಪಿ.1 ಎಂದು, ಸಾಕ್ಷಿಯ ಸಹಿಯನ್ನು ನಿಪಿ.1(ಎ) ಎಂದು ಗುರುತಿಸಲಾಯಿತು. ನ್ಯಾಯಾಲಯದ ಮುಂದೆ ಇರುವ ಒಂದು ಮರದ ದೊಣ್ಣೆಯನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ. ನಿಪಿ–1ರಲ್ಲಿರುವ ವಿಚಾರಗಳು ನನಗೆ ಗೊತ್ತಿಲ್ಲ.

(ಮಾನ್ಯ ಎಪಿಪಿರವರರ ಕೋರಿಕೆ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕಃ 19.08.2023 ರಂದು ಮಃ 12 ಗಂಟೆ ಸಮಯದಲ್ಲಿ ನಮ್ಮ ತಂದೆಯ ಹೆಸರಿನಲ್ಲಿರುವ ಜಮೀನಿನ ಬಳಿ ಜಮೀನಿನಲ್ಲಿ 1ನೇ ಆರೋಪಿಯು ಮೇಕೆ ಮತ್ತು ಕುರಿಗಳನ್ನು ಮೇಯಿಸುತ್ತಿದ್ದಾಗ ಚಾಸಾ-2ರವರು ಈ ಬಗ್ಗೆ ಕೇಳಿದಾಗ 1ನೇ ಆರೋಪಿಯು ಚಾಸಾ-2ರವರಿಗೆ ಅವ್ಯಾಚ ಶಬ್ಧಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟಕ್ಕೆ ಅಲ್ಲೆಯಿದ್ದ 2 ಮತ್ತು 3ನೇ ಆರೋಪಿತರು ಚಾಸಾ-2ರವರಿಗೆ ಅವ್ಯಾಚ ಶಬ್ಧಗಳಿಂದ ಬೈದು, 1ನೇ ಆರೋಪಿಯು ನ್ಯಾಯಾಲಯದ ಮುಂದೆ ಇರುವ ದೊಣ್ಣೆಯಿಂದ ಚಾಸಾ-2ರವರ ಕತ್ತಿನ ಹಿಂಭಾಗಕ್ಕೆ ಹಾಗೂ ಎದಗೆ ಹೊಡೆದು ನೆಲಕ್ಕೆ ಬಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ 3ನೇ ಆರೋಪಿಯು ಚಾಸಾ-2ರವರ ಎದೆಗೆ ತನ್ನ ಕಾಲಿನಿಂದ ತುಳಿದು ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟಕ್ಕೆ ಚಾಸಾ-3ರವರು ನಮ್ಮ ತಂದೆಯನ್ನು ಆರೋಪಿತರಿಂದ ರಕ್ಷಿಸಿ ನನಗೆ ಮಾಹಿತಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ನಿಪಿ-1ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆರೋಪಿತರು ನ್ಯಾಯಾಲಯದ ಮುಂದೆ ಇರುವ ದೊಣ್ಣೆಯಿಂದ ಚಾಸಾ-2ರವರಿಗೆ ಹೊಡೆದು ನೋವುಂಟು ಮಾಡಿ, ಅವ್ಯಾಚ ಶಬ್ಧಗಳಿಂದ ನಿಂದಿಸಿದ್ದರು ನಾನು ಆರೋಪಿತರ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಸಿ.ಜೆ.ಎಂ., ಚಾಮರಾಜನಗರ.

# ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಸಿ.ಜೆ.ಎಂ. ನ್ಯಾಯಾಲಯ,
# ಚಾಮರಾಜನಗರ

**ಸಿ.ಸಿಃ 664/2025**

ಫ್ರಾಸಾ–2, ಚಾಸಾ–2

| | | |
|---|---|---|
| ಸಾಕ್ಷಿದಾರರ ಹೆಸರು | : | ಮಹದೇವೆಗೌಡ |
| ತಂದೆಯ ಹೆಸರು | : | ಚಿಕ್ಕೇಗೌಡ |
| ವಯಸ್ಸು | : | 80ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸ | : | ಮುತ್ತಿಗೆ ಗ್ರಾಮ |

ಸಾಕ್ಷಿಗೆ ದಿನಾಂಕಃ 03.06.2026ರಂದು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಚಾಸಾ–1ರವರು ನನ್ನ ಮಗ. ಆರೋಪಿತರು ನಮ್ಮ ಊರಿನವರು. ಈಗ್ಗೆ ಮೂರು ವರ್ಷಗಳ ಹಿಂದೆ ನಮ್ಮ ಜಮೀನಿನಲ್ಲಿ ಆರೋಪಿತರು ಕುರಿ ಮತ್ತು ಮೇಕೆಗಳನ್ನು ಮೇಯಿಸುತ್ತಿದ್ದಾಗ, ನಮಗೂ ಮತ್ತು ಆರೋಪಿತರಿಗೂ ಮಾತಿಗೆ ಮಾತು ಬೆಳೆದಿರುತ್ತದೆ.ನಾನು ಈ ವಿಚಾರವಾಗಿ ಪೊಲೀಸರ ಮುಂದೆ ಹೇಳಿಕೆ ನೀಡಿರುವುದಿಲ್ಲ. ನ್ಯಾಯಾಲಯದ ಮುಂದೆ ಇರುವ ಒಂದು ಮರದ ದೊಣ್ಣೆಯನ್ನು ಇದೇ ಮೊದಲ ಬಾರಿಗೆ ನೋಡುತ್ತಿದ್ದೇನೆ.

(ಮಾನ್ಯ ಎಪಿಪಿರವರರ ಕೋರಿಕೆ ಮೇರೆಗೆ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕಃ 19.08.2023 ರಂದು ಮಃ 12 ಗಂಟೆ ಸಮಯದಲ್ಲಿ ನಾನು ನಮ್ಮ ಜಮೀನಿನ ಬಳಿಯಿದ್ದಾಗ, ನಮ್ಮ ಜಮೀನಿನ ಬಳಿ 1ನೇ ಆರೋಪಿಯು ಮೇಕೆ ಮತ್ತು ಕುರಿಗಳನ್ನು ಮೇಯಿಸುತ್ತಿದ್ದಾಗ ನಾನು ಈ ಬಗ್ಗೆ ಕೇಳಿದಾಗ 1ನೇ ಆರೋಪಿಯು ನನಗೆ

ಅವ್ಯಾಚ ಶಬ್ಧಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟಕ್ಕೆ ಅಲ್ಲೆಯಿದ್ದ 2 ಮತ್ತು 3ನೇ ಆರೋಪಿತರು ನನಗೆ ಅವ್ಯಾಚ ಶಬ್ಧಗಳಿಂದ ಬೈದು, 1ನೇ ಆರೋಪಿಯು ನ್ಯಾಯಾಲಯದ ಮುಂದೆ ಇರುವ ದೊಣ್ಣೆಯಿಂದ ನನ್ನ ಕತ್ತಿನ ಹಿಂಭಾಗಕ್ಕೆ ಹಾಗೂ ಎದಗೆ ಹೊಡೆದು ನೆಲಕ್ಕೆ ಬಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ 3ನೇ ಆರೋಪಿಯು ನನ್ನ ಎದೆಗೆ ತನ್ನ ಕಾಲಿನಿಂದ ತುಳಿದು ನೋವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಅಷ್ಟಕ್ಕೆ ಚಾಸಾ-3 ಮತ್ತು 4ರವರು ನನ್ನನ್ನು ಆರೋಪಿತರಿಂದ ರಕ್ಷಿಸಿ ಚಾಸಾ-1ರವರಿಗೆ ಮಾಹಿತಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ಚಾಸಾ-1ರವರು ನಿಪಿ-1ರಂತೆ ದೂರು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-1ರವರು ನನ್ನನ್ನು 108 ಆ್ಯಂಬುಲೆನ್ಸನಲ್ಲಿ ಚಾಸಾ-3 ಮತ್ತು 4ರವರ ಸಹಾಯದಿಂದ ಚಾಮರಾಜನಗರದ ಸಿಮ್ಸ್ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ದಿಃ 21.08.2023 ರಂದು ಈಗ ಓದಿ ಹೇಳಿದಂತೆ ಪೊಲೀಸರ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-2 ಎಂದು ಗುರುತಿಸಲಾಯಿತು.

ನಾವು ಮತ್ತು ಆರೋಪಿತರು ರಾಜಿ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಆರೋಪಿತರು ನ್ಯಾಯಾಲಯದ ಮುಂದೆ ಇರುವ ದೊಣ್ಣೆಯಿಂದ ನನಗೆ ಹೊಡೆದು ನೋವುಂಟು ಮಾಡಿ, ಅವ್ಯಾಚ ಶಬ್ಧಗಳಿಂದ ನಿಂದಿಸಿದ್ದರು ನಾನು ಆರೋಪಿತರ ಜೊತೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಸಿ.ಜೆ.ಎಂ., ಚಾಮರಾಜನಗರ.